ದ.ಕನ್ನಡ ಜಿಲ್ಲೆಯಲ್ಲಿ ಅಬಕಾರಿ ಸಿಬ್ಬಂದಿ ಮತ್ತು ಮೂಲಭೂತ ಸೌಕರ್ಯ ಕೊರತೆ

853 (983) ಶ್ರೀ ಯು.ಟಿ. ಖಾದರ್ (ಮಂಗಳೂರು) : ಮಾನ್ಯ ಅಬಕಾರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿ ಕಳ್ಳಭಟ್ಟಿ ತಯಾರಿಸುವುದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

ಆ) ದಕ್ಷಿಣ ಕನ್ನಡ ಜಿಲ್ಲೆಯ ಅಬಕಾರಿ ಇಲಾಖೆಯಲ್ಲಿ ಸೂಕ್ತ ಸಿಬ್ಬಂದಿ ಹಾಗೂ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಶ್ರೀ ಎಂ.ಪಿ. ರೇಣುಕಾಚಾರ್ಯ (ಅಬಕಾರಿ ಸಚಿವರು) :

ಅ) ಕಳ್ಳಭಟ್ಟಿ ತಯಾರಿಸುವುದನ್ನು ತಡೆಯಲು ಜಾರಿ ಮತ್ತು ತನಿಖೆ ಕಾರ್ಯವನ್ನು ಚುರುಕುಗೊಳಿಸಿ ರಸ್ತೆಗಾವಲು, ರಾತ್ರಿ ಗಸ್ತು ಹಾಗೂ ದಾಳಿ ಕಾರ್ಯಗಳನ್ನು ಕೈಗೊಳ್ಳುವುದರ ಮೂಲಕ ಹಾಗೂ ಕಳ್ಳಭಟ್ಟಿ ತಯಾರಿಕೆ, ಸಾಗಾಣಿಕೆ, ಸಂಗ್ರಹ ಹಾಗೂ ಮಾರಾಟ ಪ್ರಕರಣಗಳನ್ನು ತಡೆಗಟ್ಟಲು ಸಾರ್ವಜನಿಕರಿಗೆ ಪತ್ರಿಕೆಗಳ ಮೂಲಕ, ಸಮೂಹ ಮಾಧ್ಯಮಗಳ ಮೂಲಕ ಕಳ್ಳಭಟ್ಟಿ ಹಾಗೂ ನಕಲಿ ಮದ್ಯ ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಜನಜಾಗೃತಿ ಮೂಡಿಸಲಾಗುತ್ತಿದೆ. ಜಾರಿ ಸಿಬ್ಬಂದಿ ಗ್ರಾಮ ಸಭೆಗಳನ್ನು ನಡೆಸುತ್ತಿದ್ದು, ಸದರಿ ಸಭೆಗಳಲ್ಲಿ ಸ್ತ್ರೀಶಕ್ತಿ ಸಂಘಗಳು ಗ್ರಾಮ ಪಂಚಾಯಿತಿ ಹಾಗೂ ಕಂದಾಯ ಅಧಿಕಾರಿಗಳಿಗೆ ಜಮೀನು/ಕಟ್ಟಡಗಳ ಮಾಲೀಕರುಗಳಿಗೆ ಕರ್ನಾಟಕ ಅಬಕಾರಿ ಕಾಯ್ದೆ ಕಲಂ 1965 ರ ನಿಯಮ 50 ರಂತೆ ಮಾಹಿತಿ ನೀಡಲು ಕೋರಲಾಗಿದೆ. ಅಬಕಾರಿ ಸಿಬ್ಬಂದಿಯವರು ಸದಾಕಾಲ ಜಾಗೃತರಾಗಿದ್ದು, ನಿರಂತರ ದಾಳಿಕಾರ್ಯ ನಡೆಸಿ, ಯಾವುದೇ ಕಳ್ಳಭಟ್ಟಿ ದುರಂತಗಳು ಮರುಕಳಿಸದಂತೆ ಎಚ್ಚರಿಕೆ ವಹಿಸಲು ಸೂಚಿಸಿದೆ. ಅಲ್ಲದೆ ಕಳ್ಳಭಟ್ಟಿ ನಿರ್ಮೂಲನೆ ಬಗ್ಗೆ ಕ್ರಿಯಾ ಯೋಜನೆಯನ್ನು ಸಿದ್ದಪಡಿಸಿದ್ದು ಸದರಿ ಕ್ರಿಯಾ ಯೋಜನೆಯನ್ವಯ ಕಳ್ಳಭಟ್ಟಿ ನಿರ್ಮೂಲನೆಗೆ ಕ್ರಮ ಕೈಗೊಳ್ಳಲಾಗುತ್ತಿದೆ,